ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/06/ಸುತ್ತೋಲೆ/2020-21

ದಿನಾಂಕ:18.06.2020

# ಸುತ್ತೋಲೆ

ವಿಷಯ: ಜೂನ್ 21 ನ್ನು 'ಅಂತರರಾಷ್ಟ್ರೀಯ ಯೋಗ ದಿನ'ವನ್ನಾಗಿ ಆಚರಿಸುವ ಬಗ್ಗೆ.

* * * * * * * *

***ವಿಶ್ವಸಂಸ್ಥೆಯು ಜೂನ್ 21 ನ್ನು 'ಅಂತರರಾಷ್ಟ್ರೀಯ ಯೋಗ ದಿನ'ವನ್ನಾಗಿ ಘೋಷಿಸಿದೆ.*** ಯೋಗ ಭಾರತದ ಪ್ರಾಚೀನ ಸಂಪ್ರದಾಯದ ಒಂದು ಅಮೂಲ್ಯ ಕೊಡುಗೆಯಾಗಿದೆ. ಇದು ಮನಸ್ಸು ಮತ್ತು ದೇಹದ ಐಕ್ಯತೆಯನ್ನು ಸಾಕಾರಗೊಳಿಸಿದೆ. ಯೋಗವು ನಮ್ಮ ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಲು ಉದ್ದೇಶಿಸಲಾಗಿರುವಂತಹ ಉತ್ತಮ ಜೀವನ ನಿರ್ವಹಣೆಯ ಒಂದು ವಿಜ್ಞಾನವಾಗಿದೆ. ಯೋಗವನ್ನು ಅಭ್ಯಾಸ ಮಾಡುವುದರಿಂದ ಭಾವನಾತ್ಮಕ, ಮಾನಸಿಕ ಮತ್ತು ಶಾರೀರಿಕ ಹಂತಗಳ ಆಂತರಿಕ ಸಂಬಂಧಗಳ ಬಗ್ಗೆ ತಿಳುವಳಿಕೆಗೆ ಸಹಾಯವಾಗುತ್ತದೆ. ಪ್ರಸ್ತುತ COVID 19 ಮತ್ತು ಇತರೆ ಸಾಂಕ್ರಾಮಿಕ ರೋಗಗಳು ಹರಡುತ್ತಿರುವ ಹಿನ್ನೆಲೆಯಲ್ಲಿ ರೋಗವನ್ನು ತಡೆಗಟ್ಟುವ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಿಕೊಳ್ಳಲು ಸಹಕಾರಿಯಾಗುತ್ತದೆ.

ಕಾಲೇಜು ಶಿಕ್ಷಣ ಇಲಾಖಾ ವತಿಯಿಂದ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ***"ಮನೆಯಲ್ಲೇ ಯೋಗ ಮತ್ತು ಮನೆಯವರೊಂದಿಗೆ ಯೋಗ"*** ಕಾರ್ಯಕ್ರಮವನ್ನು ದಿನಾಂಕ:21.06.2020 ರಂದು ಬೆಳಗ್ಗೆ 8.00 ಗಂಟೆಗೆ ಕಾಲೇಜು ಶಿಕ್ಷಣ ಇಲಾಖೆಯ ಯೂಟ್ಯೂಬ್ ಚಾನಲ್ ಆದ ವಿಜಯಿಭವದಲ್ಲಿ ನೇರಪ್ರಸಾರ ಮೂಲಕ ಆಯೋಜಿಸಲಾಗಿದ್ದು, ಸದರಿ ಕಾರ್ಯಕ್ರಮವನ್ನು ***ಕರ್ನಾಟಕ ಸರ್ಕಾರದ ಮಾನ್ಯ ಉಪ ಮುಖ್ಯಮಂತ್ರಿಗಳಾದ ಡಾ: ಸಿ. ಎನ್. ಅಶ್ವಥ್‌ನಾರಾಯಣ್*** ರವರು ಉದ್ಘಾಟಿಸಲಿದ್ದು, ಮಾಜಿ ಭಾರತೀಯ ಕ್ರಿಕೆಟರ್ ***ಶ್ರೀ ವೆಂಕಟೇಶ್ ಪ್ರಸಾದ್*** ಹಾಗೂ ಖ್ಯಾತ ಯೋಗ ತರಬೇತುದಾರರಾದ ***ಶ್ರೀಮತಿ ಮಧುಶ್ರೀ ಸಂದರ್ಶ್*** ರವರು ಯೋಗ ಕಾರ್ಯಕ್ರಮವನ್ನು ನಡೆಸಿಕೊಡಲಿದ್ದು, ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರು ಕಾರ್ಯಕ್ರಮದ ನೇತೃತ್ವ ವಹಿಸಲಿದ್ದಾರೆ. ಸದರಿ ಕಾರ್ಯಕ್ರಮದಲ್ಲಿ ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ / ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳು, ಅಧ್ಯಾಪಕರುಗಳು, ವಿದ್ಯಾರ್ಥಿಗಳು ಮತ್ತು ಬೋಧಕೇತರ ಸಿಬ್ಬಂದಿಗಳು ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಿರುವ ಗೂಗಲ್ ಫಾರಂ ಮೂಲಕ ಹೆಸರುಗಳನ್ನು ನೋಂದಾಯಿಸಿಕೊಂಡು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಲು ಸೂಚಿಸಲಾಗಿದೆ. ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಎಲ್ಲರಿಗೂ ಪ್ರಮಾಣಪತ್ರ ನೀಡಲಾಗುವುದು.

ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು

**ಇವರಿಗೆ,**

1. ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಸೂಕ್ತ ಕ್ರಮಕ್ಕಾಗಿ.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ- ಸೂಕ್ತ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾ.ಶಿ.ಆ. ಕಛೇರಿ, ಬೆಂಗಳೂರು-ವೆಬ್‌ಸೈಟ್‌ನಲ್ಲಿ ಪ್ರಕಟಣೆಗಾಗಿ.
4. ಕಛೇರಿ ಪ್ರತಿ.